ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**
GSTIN : 29AAALB0060D1ZS

ಸಂಖ್ಯೆ : ಬೆಂಅಪ್ರಾ/ನಯೋಸ/PRL-35/ 2023-24/ 564 /2024-25.
No. E-Office No.

ದಿನಾಂಕ :
Date : 14/6/2024

# ಕಾರ್ಯಾದೇಶ

[ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17[2-A) ರಡಿಯಲ್ಲಿ]

ವಿಷಯ:- ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಗಟ್ಟಹಳ್ಳಿ ಗ್ರಾಮದ ಸ ನಂ. 201/1, 202/2, 215/1, 215/2, 217/1, 217/10, 217/11 ಒಟ್ಟು 14ಎ-37ಗುಂ ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಅರ್ಜಿದಾರರಾದ M/s. Akarshak Reality Pvt Ltd ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:
1. ಅರ್ಜಿದಾರರ ಮನವಿ ದಿನಾಂಕ 19.12.2023.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 1.3.5/2024, ದಿನಾಂಕ 25.01.2024.
3. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-35/2983/2023-24, ದಿನಾಂಕ 22.03.2024.
4. ಕೆನರಾ ಬ್ಯಾಂಕ್ ಚಲನ್ ನಂ. GN240310078, ದಿನಾಂಕ 30.03.2024.
5. ಈ ಕಛೇರಿಯ ಅ.ಟಿ. ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-35/2023-24/165/2024-25, ದಿನಾಂಕ 02.05.2024.
6. ಅಧಿಕ ಜಿಲ್ಲಾ ನೊಂದಣಾಧಿಕಾರಿ, ಬೆಂಗಳೂರು ನಗರ ಜಿಲ್ಲೆ ರವರ ಕಛೇರಿಯಲ್ಲಿ ನೊಂದಾಯಿಸಲ್ಪಟ್ಟ ಪರಿತ್ಯಾಜನಾ ಪತ್ರ BDA-1-00659-2024-25, ದಿನಾಂಕ 03.06.2024.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಗಟ್ಟಹಳ್ಳಿ ಗ್ರಾಮದ ಸ ನಂ. 201/1 ರಲ್ಲಿ 3ಎ-10ಗುಂ, ಸ ನಂ. 202/2 ರಲ್ಲಿ 2ಎ-05ಗುಂ, ಸ ನಂ. 215/1 ರಲ್ಲಿ 4ಎ-01ಗುಂ, ಸ ನಂ. 215/2 ರಲ್ಲಿ 0ಎ-39ಗುಂ, ಸ ನಂ. 217/1 ರಲ್ಲಿ 3ಎ-18ಗುಂ, ಸ ನಂ. 217/10 ರಲ್ಲಿ 0ಎ-22.08ಗುಂ, ಸ ನಂ. 217/11 ರಲ್ಲಿ 0ಎ-21.08ಗುಂ ಒಟ್ಟು 14ಎ-37ಗುಂ ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯ ಅನುಮೋದನೆ ಕೋರಿ ಅರ್ಜಿದಾರರಾದ M/s. Akarshak Reality Pvt Ltd ರವರು ಉಲ್ಲೇಖ [1] ರ ಅರ್ಜಿಯಲ್ಲಿ ಕೋರಿರುತ್ತಾರೆ.

ವಿಷಯ:- ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಗಟ್ಟಹಳ್ಳಿ ಗ್ರಾಮದ ಸ ನಂ. 201/1, 202/2, 215/1, 215/2, 217/1, 217/10, 217/11 ಒಟ್ಟು 14ಎ-37ಗುಂ ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಅರ್ಜಿದಾರರಾದ M/s. Akarshak Reality Pvt Ltd ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

ಸದರಿ ಪ್ರಸ್ತಾವನೆಯನ್ನು ಉಲ್ಲೇಖ [2] ರಲ್ಲಿನ ದಿನಾಂಕ 25.01.2024 ರಂದು ನಡೆದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ 1.3.5/2024 ರಲ್ಲಿ ಮಂಡಿಸಿ ಚರ್ಚಿಸಲಾಗಿದ್ದು, ಚರ್ಚೆಯ ನಂತರ ಸಲ್ಲಿಸಿರುವ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯು ಅನುಮೋದಿತ ಮಹಾಯೋಜನೆ RMP-2015 ರ ವಲಯ ನಿಯಮಾವಳಿಗಳಿಗೆ ಅನುಗುಣವಾಗಿರುವುದನ್ನು ಸಭೆಯು ಗಮನಿಸಿತು. ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಗಟ್ಟಹಳ್ಳಿ ಗ್ರಾಮದ ಸ ನಂ. 201/1 ರಲ್ಲಿ 3ಎ-10ಗುಂ, ಸ ನಂ. 202/2 ರಲ್ಲಿ 2ಎ-05ಗುಂ, ಸ ನಂ. 215/1 ರಲ್ಲಿ 4ಎ-01ಗುಂ, ಸ ನಂ. 215/2 ರಲ್ಲಿ 0ಎ-39ಗುಂ, ಸ ನಂ. 217/1 ರಲ್ಲಿ 3ಎ-18ಗುಂ, ಸ ನಂ. 217/10 ರಲ್ಲಿ 0ಎ-22.08ಗುಂ, ಸ ನಂ. 217/11 ರಲ್ಲಿ 0ಎ-21.08ಗುಂ ಒಟ್ಟು 14ಎ-37ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು Demarcation & Development ಉದ್ದೇಶಕ್ಕೆ ಕೆಲವೊಂದು ಷರತ್ತುಗಳಿಗೊಳಪಟ್ಟು ಅನುಮೋದಿಸಲು ತೀರ್ಮಾನಿಸಲಾಯಿತು. ಈ ಕುರಿತು ನಿಯಮಾನುಸಾರ ಮುಂದಿನ ಕ್ರಮ ವಹಿಸುವ ಅಧಿಕಾರವನ್ನು ಆಯುಕ್ತರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಯಿತು.

ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ತೀರ್ಮಾನದಂತೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಸಂಬಂಧ ಪಾವತಿಸಬೇಕಾದ ವಿವಿಧ ಶುಲ್ಕಗಳ ಬಾಬ್ತು ಒಟ್ಟು ₹.1,03,00,200/- [₹. ಒಂದು ಕೋಟಿ ಮೂರು ಲಕ್ಷದ ಇನ್ನೂರು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಲು ಉಲ್ಲೇಖ [3] ರ ಈ ಕಛೇರಿ ಪತ್ರದಲ್ಲಿ ತಿಳಿಸಲಾಗಿತ್ತು. ಉಲ್ಲೇಖ [4] ರಂತೆ ಅರ್ಜಿದಾರರು ಪ್ರಾಧಿಕಾರದ ಕೆನರಾ ಬ್ಯಾಂಕ ಚಲನ್ ನಂ. GN240310078 ರ ಮೂಲಕ ದಿನಾಂಕ 30.03.2024 ರಂದು ಶುಲ್ಕ ಪಾವತಿಸಿರುತ್ತಾರೆ. ಅರ್ಜಿದಾರರು ಪಾವತಿಸಿರುವ ಮೊತ್ತವು ಪ್ರಾಧಿಕಾರದ ಖಾತೆಗೆ ಸಂದಾಯವಾಗಿರುವ ಬಗ್ಗೆ Pass Sheet ನಲ್ಲಿ ನಮೂದಾಗಿರುತ್ತದೆ.

ತಾತ್ಕಾಲಿಕ ಕರಡು ವಸತಿ ವಿನ್ಯಾಸ ನಕ್ಷೆಯಲ್ಲಿನ ಉದ್ಯಾನವನ / ಬಯಲು ಜಾಗ ಮತ್ತು ರಸ್ತೆಗಾಗಿ ಕಾಯ್ದಿರಿಸಿರುವ ಪ್ರದೇಶಗಳನ್ನು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಹಸ್ತಾಂತರಿಸುವಂತೆ ಅರ್ಜಿದಾರರಿಗೆ ಮತ್ತು ಸದರಿ ಪ್ರದೇಶಗಳನ್ನು ಹಸ್ತಾಂತರಿಸಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರು [ಪೂರ್ವ ವಿಭಾಗ], ಇವರಿಗೆ ಉಲ್ಲೇಖ [5] ರ ಈ ಕಛೇರಿಯ ಪತ್ರದಲ್ಲಿ ತಿಳಿಸಲಾಗಿತ್ತು. ಅದರಂತೆ ತಾತ್ಕಾಲಿಕ ಕರಡು ವಸತಿ ವಿನ್ಯಾಸ ನಕ್ಷೆಯಲ್ಲಿನ ಉದ್ಯಾನವನ / ಬಯಲು ಜಾಗ ಮತ್ತು ರಸ್ತೆಗಾಗಿ ಕಾಯ್ದಿರಿಸಿರುವ ಪ್ರದೇಶಗಳನ್ನು ಉಲ್ಲೇಖ (6) ರಂತೆ ದಿನಾಂಕ.03.06.2024 ರಂದು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಹಸ್ತಾಂತರಿಸಿ ಕೊಂಡಿರುವುದಾಗಿ ಕಾರ್ಯಪಾಲಕ ಅಭಿಯಂತರರು, ಪೂರ್ವ ವಿಭಾಗ ರವರು ನೊಂದಾಯಿತ ಪರಿತ್ಯಾಜನಾ ಪತ್ರದ ಪ್ರತಿಯೊಂದಿಗೆ ವರದಿ ಮಾಡಿರುತ್ತಾರೆ.

ವಿಷಯ:- ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಗಟ್ಟಹಳ್ಳಿ ಗ್ರಾಮದ ಸ ನಂ. **201/1, 202/2, 215/1, 215/2, 217/1, 217/10, 217/11** ಒಟ್ಟು **14**ಎ-**37**ಗುಂ ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ **1961** ಕಲಂ **17 (2-A)** ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಅರ್ಜಿದಾರರಾದ **M/s. Akarshak Reality Pvt Ltd** ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಗಟ್ಟಹಳ್ಳಿ ಗ್ರಾಮದ ಸ ನಂ. 201/1 ರಲ್ಲಿ 3ಎ-10ಗುಂ, ಸ ನಂ. 202/2 ರಲ್ಲಿ 2ಎ-05ಗುಂ, ಸ ನಂ. 215/1 ರಲ್ಲಿ 4ಎ-01ಗುಂ, ಸ ನಂ. 215/2 ರಲ್ಲಿ 0ಎ-39ಗುಂ, ಸ ನಂ. 217/1 ರಲ್ಲಿ 3ಎ-18ಗುಂ, ಸ ನಂ. 217/10 ರಲ್ಲಿ 0ಎ-22.08ಗುಂ, ಸ ನಂ. 217/11 ರಲ್ಲಿ 0ಎ-21.08ಗುಂ ಒಟ್ಟು 14ಎ-37ಗುಂ ವಿಸ್ತೀರ್ಣದ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17(2-A) ರ ಅಡಿಯಲ್ಲಿ 'Demarcation & Development' ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಲಾಗಿದೆ.

| | |
|---|---|
| 1. | ರೇರಾ ಅಧಿನಿಯಮ 2016 ಹಾಗೂ ಸಂಬಂಧಿತ ಅಧಿನಿಯಮಗಳು 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೊಂದಣಿ ಮಾಡಿಸುವುದು. |
| 2. | ಪ್ರಶ್ನಿತ ಜಮೀನುಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಾಗಲೀ / ಲೋಕಾಯುಕ್ತದಲ್ಲಾಗಲೀ ಯಾವುದೇ ವಿಚಾರಣಾ ಪ್ರಾಧಿಕಾರದಲ್ಲಾಗಲೀ ಪ್ರಕರಣ ದಾಖಲಾಗಿದ್ದಲ್ಲಿ ಅರ್ಜಿದಾರರೇ ಬಗೆಹರಿಸಿಕೊಳ್ಳತಕ್ಕದ್ದು. |
| 3. | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪೂರ್ವಾನುಮೋದನೆ ಇಲ್ಲದೆ ನಿವೇಶನಗಳ ಅಳತೆ ಹಾಗೂ ನಿವೇಶನಗಳ ಒಟ್ಟು ಸಂಖ್ಯೆಯನ್ನು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯಲ್ಲಿ ಬದಲಾಯಿಸತಕ್ಕದ್ದಲ್ಲ. |
| 4. | ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಗಳನ್ನು ಮಾಡುವಂತಿಲ್ಲ. |
| 5. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ಪ್ರತಿ ನಿವೇಶನಕ್ಕೂ ಕುಡಿಯುವ ನೀರು, ತ್ಯಾಜ್ಯ ನೀರು, ವಿಲೇವಾರಿಗಾಗಿ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸತಕ್ಕದ್ದು ಹಾಗೂ ಉದ್ದೇಶಿತ ವಸತಿ ವಿನ್ಯಾಸದಲ್ಲಿ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 6. | ಉದ್ಯಾನವನ ಮತ್ತು ಬಯಲುಜಾಗಗಳನ್ನು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನಕ್ಷೆ ಪ್ರಕಾರ ಶೇ.100 ರಷ್ಟು ನಿವೇಶನಗಳ ಬಿಡುಗಡೆ ಕೋರುವ ಮೊದಲು Chain link Fencing ಮಾಡಿ ಹಾಗೂ ಅಭಿವೃದ್ಧಿಪಡಿಸುವುದು. |
| 7. | ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿ ತೋರಿಸಿರುವ ರಸ್ತೆ ಅಗಲವನ್ನು ಯಾವುದೇ ಕಾರಣಕ್ಕೂ ಕಡಿಮೆ ಮಾಡಬಾರದು. |
| 8. | ಬಫರ್ ಪ್ರದೇಶದಲ್ಲಿ ಗಿಡ-ಮರಗಳನ್ನು ಬೆಳಸತಕ್ಕದ್ದು |

| | |
|---|---|
| 9. | ಅರ್ಜಿದಾರರು ಉದ್ದೇಶಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 10. | ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ಸುಳ್ಳು ದಾಖಲೆ ಅಥವಾ ಇನ್ನಿತರೆ ಪೋರ್ಜರಿ ದಾಖಲಾತಿಗಳನ್ನು ನೀಡಿರುವುದು ರುಜುವಾತಾದಲ್ಲಿ ಈಗ ತಾತ್ಕಾಲಿಕ ಅನುಮೋದನೆ ನೀಡಿರುವ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನಕ್ಷೆ ಅನುಮೋದನೆಯು ತನ್ನಿಂದತಾನೆ ರದ್ದಾಗುವುದೆಂದು ಭಾವಿಸತಕ್ಕದ್ದು. |
| 11. | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು. |
| 12. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ವಸತಿ ಅಭಿವೃದ್ಧಿಗಳಿಂದ ಉತ್ಪಾದನೆಯಾಗುವ ಘನ ತ್ಯಾಜ್ಯಗಳನ್ನು, ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿಗಳಾಗಿ ವಿಂಗಡಿಸಲು ಹಾಗೂ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 13. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿ ಎಲ್ಲಾ ರಸ್ತೆಗಳನ್ನು IRC Specification ಪ್ರಕಾರ ಅಭಿವೃದ್ಧಿ ಪಡಿಸತಕ್ಕದ್ದು, ಅದಕ್ಕೂ ಮುಂಚೆ ಅಂದಾಜುಪಟ್ಟಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿಯಂತರ ವಿಭಾಗದಿಂದ ಅನುಮೋದಿಸಿಕೊಳ್ಳತಕ್ಕದ್ದು, ರಸ್ತೆ ಅಭಿವೃದ್ಧಿ ಪಡಿಸುವ ಸಮಯದಲ್ಲಿ ಅಭಿಯಂತರ ವಿಭಾಗದಿಂದ ಸ್ಥಳ ಪರಿಶೀಲನೆಗಾಗಿ ಮತ್ತು ಕಾಮಗಾರಿ ಪರಿಶೀಲನೆಗೆ ಅನುವು ಮಾಡಿಕೊಡತಕ್ಕದ್ದು. |
| 14. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ಪ್ರತಿ ನಿವೇಶನಕ್ಕೂ ಸೋಲಾರ್ ಲೈಟಿಂಗ್ ಮತ್ತು ಸೋಲಾರ್ ವಾಟರ್ ಹೀಟಿಂಗ್ ವ್ಯವಸ್ಥೆಯನ್ನು ಅಳವಡಿಸಕ್ಕದ್ದು. |
| 15. | ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17-2ಬಿ ರನ್ವಯ ವಿನ್ಯಾಸವನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿ ಪಡಿಸಿದ ನಂತರ, ಸಕ್ಷಮ ಪ್ರಾಧಿಕಾರಗಳಿಂದ ಸಿವಿಲ್, ವಿದ್ಯುತ್, ಒಳಚರಂಡಿ ಮತ್ತು ನೀರು ಸರಬರಾಜು ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಕುರಿತು ಪ್ರಮಾಣ ಪತ್ರಗಳೊಂದಿಗೆ ಕೋರಿಕೆ ಸಲ್ಲಿಸಿದಲ್ಲಿ ಅಂತಿಮ ವಸತಿ ವಿನ್ಯಾಸವನ್ನು ಮತ್ತು ವಸತಿ ನಿವೇಶನಗಳನ್ನು ಬಿಡುಗಡೆಗೊಳಿಸಲಾಗುವುದು. |
| 16. | ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಕೋರಿರುವ ಜಮೀನುಗಳ ಮೇಲೆ ಯಾವುದಾದರೂ ನ್ಯಾಯಾಲಯಗಳಲ್ಲಿ ಪ್ರಕರಣಗಳು ದಾಖಲಾಗಿದ್ದಲ್ಲಿ ಅಥವಾ ಚಾಲ್ತಿಯಲ್ಲಿದ್ದಲ್ಲಿ ವಿನ್ಯಾಸದ ಅಂತಿಮ ಅನುಮೋದನೆಯು ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ. |
| 17. | ವಸತಿ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡುವ ಪೂರ್ವಭಾವಿಯಾಗಿ ಸಂಬಂಧ ಪಟ್ಟ ಸಕ್ಷಮ ಪ್ರಾಧಿಕಾರದಿಂದ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯತಕ್ಕದ್ದು. |

| | |
|---|---|
| 18. | ಸಿವಿಲ್ ಕಾಮಗಾರಿ ಕೆಲಸಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ಅರ್ಜಿದಾರರೇ ಕಾರ್ಯಗತ ಮಾಡತಕ್ಕದ್ದು. |
| 19. | ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ/ ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಉಳಿದ ಬಳಕೆಗಾಗಿ ಬಳಸತಕ್ಕದು. |
| 20. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ಪ್ರತಿ ನಿವೇಶನಕ್ಕೆ ಗೃಹ ಬಳಕೆ, ಕುಡಿಯುವ ನೀರಿನ ಹಾಗೂ ಇತರೆ ಉಪಯೋಗದ ನೀರು ಸರಬರಾಜು ವ್ಯವಸ್ಥೆಗಾಗಿ ಪ್ರತ್ಯೇಕ ಕೊಳವೆಗಳನ್ನು ಅಳವಡಿಸತಕ್ಕದ್ದು. |
| 21. | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು ಹಾಗೂ ಅದೇ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 22. | ಅನುಮೋದನೆ ಪಡೆಯುವ ಸಂಬಂಧ ತಪ್ಪು ಮಾಹಿತಿ / ದಾಖಲೆಗಳನ್ನು ಸಲ್ಲಿಸಿ, ಅನುಮೋದನೆ ಪಡೆದಿರುವುದು ದೃಢಪಟ್ಟಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 76(O) ರ ಅಡಿಯಲ್ಲಿ ಕ್ರಮವಹಿಸಲಾಗುವುದು. |
| 23. | BESCOM ನಿರ್ದೇಶನದಂತೆ ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ವಿದ್ಯುತ್ ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಲು ಕ್ರಮ ಕೈಗೊಳ್ಳತಕ್ಕದ್ದು. |
| 24. | ಸದರಿ ವಸತಿ ವಿನ್ಯಾಸದಲ್ಲಿ ಪ್ರಾಧಿಕಾರದ ದಿನಾಂಕ.08/11/2010 ರ ಸುತ್ತೋಲೆಯಂತೆ ಒಟ್ಟು ವಸತಿ ನಿವೇಶನಗಳ ಶೇ.10 ರಷ್ಟು ವಸತಿ ನಿವೇಶನಗಳನ್ನು ಆರ್ಥಿಕ ಹಿಂದುಳಿದ ವರ್ಗದವರಿಗಾಗಿ (EWS) ಮತ್ತು ಕಡಿಮೆ ಆದಾಯ ವರ್ಗದವರಿಗಾಗಿ (LIG) ಕಾಯ್ದಿರಿಸಕ್ಕದ್ದು, ಆ ವರ್ಗದವರಿಗೆ ನಿವೇಶನವನ್ನು ಹಂಚಿಕೆ ಮಾಡತಕ್ಕದ್ದು. ಆರ್ಥಿಕ ದುರ್ಬಲ ವರ್ಗದವರಿಗಾಗಿ (EWS) ಕಾಯ್ದಿರಿಸಿದ ನಿವೇಶನಗಳನ್ನು ಒಂದುಗೂಡಿಸಿ ದೊಡ್ಡ ಅಳತೆಯ ನಿವೇಶನವನ್ನಾಗಿ ಸಮಾಮೇಲನಾ ಮಾಡಿದ್ದಲ್ಲಿ ಮೂಲ ಆಶಯ ವಿಫಲವಾಗುವುದರಿಂದ ಆರ್ಥಿಕವಾಗಿ ಹಿಂದುಳಿದ ವರ್ಗದವರಿಗಾಗಿ (EWS) ಕಾಯ್ದಿರಿಸಿದ ವಸತಿ ನಿವೇಶನಗಳನ್ನು ಸಮಾಮೇಲನಾ ಮಾಡತಕ್ಕದ್ದಲ್ಲ. |
| 25. | BWSSB / KUWSDB/RWS, BESCOM ಇಲಾಖೆಗಳಿಂದ ಹಾಗೂ ಅಗತ್ಯಕ್ಕನುಗುಣವಾಗಿ KSPCB ರವರಿಂದ ಹಾಗೂ ಇತರೆ ಸಂಬಂಧಿತ ಇಲಾಖೆಗಳಿಂದ ಕಾಮಗಾರಿ ಮುಕ್ತಾಯ ಪ್ರಮಾಣ ಪತ್ರಗಳನ್ನು ಪಡೆದು ಪ್ರಾಧಿಕಾರಕ್ಕೆ ಸಲ್ಲಿಸುವುದು. |
| 26. | ಬಡಾವಣೆ ನಕ್ಷೆಯಲ್ಲಿ Transformer Yard, RWH, STP, OHT, SWM ಗಳಿಗಾಗಿ ಸೂಕ್ತ ಜಾಗಗಳನ್ನು ಕಾಯ್ದಿರಿಸಿದ್ದು ಇವುಗಳನ್ನು ಬದಲಾಯಿಸುವಂತಿಲ್ಲ ಹಾಗೂ ಸಂಬಂಧಪಟ್ಟ ಸಂಸ್ಥೆಯ ಅಭಿಪ್ರಾಯದಂತೆ ಅಭಿವೃದ್ಧಿಪಡಿಸುವುದು. |

| | |
|---|---|
| 27. | ಸದರಿ ಅನುಮೋದನೆಯಂತೆ ವಿನ್ಯಾಸದಲ್ಲಿನ ಎಲ್ಲಾ ಕಾಮಗಾರಿಗಳನ್ನು 3 ವರ್ಷಗಳ ಒಳಗಾಗಿ ಪೂರ್ಣಗೊಳಿಸಿ, ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಕುರಿತು ಸಕ್ಷಮ ಪ್ರಾಧಿಕಾರದಿಂದ ದೃಢೀಕರಣ ಪತ್ರಗಳೊಂದಿಗೆ ಅಂತಿಮ ಅನುಮೋದನೆ ಪಡೆಯತಕ್ಕದ್ದು. ಇಲ್ಲವಾದಲ್ಲಿ ಅವಧಿ ಮುಕ್ತಾಯ ಪೂರ್ವದಲ್ಲಿ ಸಕಾರಣಗಳೊಂದಿಗೆ ಮನವಿ ಸಲ್ಲಿಸಿ, ಅವಧಿ ವಿಸ್ತರಣೆಗೆ ಅನುಮತಿ ಪಡೆಯತಕ್ಕದ್ದು. |
| 28. | ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಮೇಲ್ಕಂಡ ಷರತ್ತುಗಳೊಂದಿಗೆ ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಗಟ್ಟಹಳ್ಳಿ ಗ್ರಾಮದ ಸ ನಂ. 201/1 ರಲ್ಲಿ 3ಎ-10ಗುಂ, ಸ ನಂ. 202/2 ರಲ್ಲಿ 2ಎ-05ಗುಂ, ಸ ನಂ. 215/1 ರಲ್ಲಿ 4ಎ-01ಗುಂ, ಸ ನಂ. 215/2 ರಲ್ಲಿ 0ಎ-39ಗುಂ, ಸ ನಂ. 217/1 ರಲ್ಲಿ 3ಎ-18ಗುಂ, ಸ ನಂ. 217/10 ರಲ್ಲಿ 0ಎ-22.08ಗುಂ, ಸ ನಂ. 217/11 ರಲ್ಲಿ 0ಎ-21.08ಗುಂ ಒಟ್ಟು 14ಎ-37ಗುಂ ವಿಸ್ತೀರ್ಣದ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17(2-A) ರ ಅಡಿಯಲ್ಲಿ 'Demarcation & Development' ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲಾಗಿದೆ.

ಆಯುಕ್ತರು
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

ಇವರಿಗೆ,

M/s. Akarshak Reality Pvt Ltd
2/4, Langford Garden,
Richmond Road, Bangalore-560 025.